ಕರ್ನಾಟಕ ಸರ್ಕಾರ

# ಅರಾಭಿಕೊತ್ತನೂರು ಗ್ರಾಮ ಪಂಚಾಯಿತಿ ಕಾರ್ಯಾಲಯ

## ಕೋಲಾರ ತಾಲ್ಲೂಕು

ಸಂಖ್ಯೆ:ಅ.ಕೊ.ಗ್ರಾ.ಪಂ.ಸಿ.ಆರ್: /2020-21 ದಿನಾಂಕ:- 14-05-2020

ರವರಿಗೆ,

ಮಾನ್ಯ ಶ್ರೀ ಕೆ. ಎಸ್. ಈಶ್ವರಪ್ಪ ರವರು,
ಮಾನ್ಯ ಸಚಿವರು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕರ್ನಾಟಕ ಸರ್ಕಾರ.

ವಿಷಯ :- ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಕೋರಿ ಮನವಿ ಪತ್ರ

*****

ಇಡೀ ದೇಶಾದಂತ್ಯ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದ ಪರಿಣಾಮ, ಕರ್ನಾಟಕದಲ್ಲಿ, ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-19ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ.

ಚುನಾಯಿತ ಪ್ರತಿ ನಿಧಿಗಳು ಹಾಗು ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ, ಸರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಮುಖವಾದದ್ದು, ಗ್ರಾಮ ಪಂಚಾಯತ್ ಒಂದು ಸ್ಥಳೀಯ ಸ್ವಯಂ ಸರ್ಕಾರ, ಹೀಗಾಗಿಯೇ ಇಡೀ ರಾಜ್ಯಾದಾದ್ಯಂತ ಕೋವಿಡ್-19ರ ಪರಿಸ್ಥಿತಿ ಘೋಷಣೆಯ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂ ಸೇವಾ ಸಂಸ್ಥೆಗಳ ಸ್ವಯಂಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್‌ನ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು, ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್

K.N. Savitha

ಅಧ್ಯಕ್ಷರು
ಅರಾಭಿಕೊತ್ತನೂರು ಗ್ರಾಮ ಪಂಚಾಯಿ
ಕೋಲಾರ ತಾಲ್ಲೂಕು.

V. A. Vely

ಉಪಾಧ್ಯಕ್ಷರು
ಅರಾಭಿಕೊತ್ತನೂರು ಗ್ರಾಮ ಪಂಚಾಯಿತಿ
ಕೋಲಾರ ತಾಲ್ಲೂಕು.

ಪು.ತಿ.ನೋ

ಅಭಿವೃದ್ಧಿಯಲ್ಲಿ ನಮ್ಮ ಪಾತ್ರ ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನೂ ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ.

ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸಿರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರಿಯುತ್ತಿರುವ ಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈ ಬಿಟ್ಟು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಕೋರಿ ನಮ್ಮ ಪಂಚಾಯತ್‌ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ. ಇದೇ ಪಂಚಾಯತ್‌ನ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

K.N. Savitha
ಅಧ್ಯಕ್ಷರು
ಅರಾಭಿಕೊತ್ತನೂರು ಗ್ರಾಮ ಪಂಚಾಯಿತಿ

V. A. Venu
ಉಪಾಧ್ಯಕ್ಷರು
ಅರಾಭಿಕೊತ್ತನೂರು ಗ್ರಾಮ ಪಂಚಾಯಿತಿ
ಕೋಲಾರ ತಾಲ್ಲೂಕು.

ಇಂತಿ,

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು
ಅರಾಭಿಕೊತ್ತನೂರು ಗ್ರಾಮ ಪಂಚಾಯತ್ ಕೋಲಾರ ತಾಲ್ಲೂಕು ಕೋಲಾರ ಜಿಲ್ಲೆ

**<u>ಯಥಾ ಪ್ರತಿ:-</u>**

1. ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
2. ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
3. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
4. ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ ಕರ್ನಾಟಕ.

| ಅರಾಭಿಕೊತ್ತನೂರು ಗ್ರಾಮ ಪಂಚಾಯತ್ ಕೋಲಾರ ತಾಲ್ಲೂಕು ಕೋಲಾರ ಜಿಲ್ಲೆ | | | |
|---|---|---|---|
| ಕ್ರಸಂ | ಹೆಸರು | ಪದನಾಮ | ಸಹಿ |
| 1 | ಕೆ.ಎನ್.ಸವಿತಾ | ಅಧ್ಯಕ್ಷರು | K.N. Savitha |
| 2 | ವಿ.ಶ್ರೀನಿವಾಸ್ | ಉಪಾಧ್ಯಕ್ಷರು | [signature] |
| 3 | ಎಂ.ಸುಜಾತ ಎನ್ ಗೌಡ | ಸದಸ್ಯರು | M. Sujatha N Gowda |
| 4 | ರತ್ನಮ್ಮ ಎಂ | ಸದಸ್ಯರು | M. Rathnamma |
| 5 | ಎ.ಶ್ರೀಧರ | ಸದಸ್ಯರು | [signature] |
| 6 | ವೈ.ಮುನಿಯಪ್ಪ | ಸದಸ್ಯರು | [signature] |
| 7 | ಶೋಭಾರಾಣಿ ಪಿ | ಸದಸ್ಯರು | P. Shobharani. |
| 8 | ರತ್ನಮ್ಮ | ಸದಸ್ಯರು | |
| 9 | ಸಿ.ಎಂ.ರಾಘವೇಂದ್ರ | ಸದಸ್ಯರು | [signature] |
| 10 | ಎಂ.ಜಿ.ಅರುಣ | ಸದಸ್ಯರು | M.G. [signature] |
| 11 | ಬಿ.ನಾರಾಯಣಪ್ಪ | ಸದಸ್ಯರು | B. Narayanappa |
| 12 | ಟಿ.ಎಂ.ಮಂಜುನಾಥ | ಸದಸ್ಯರು | |
| 13 | ಸರಿತ | ಸದಸ್ಯರು | |
| 14 | ಎಂ.ಗೋವಿಂದಪ್ಪ | ಸದಸ್ಯರು | Govindappa |
| 15 | ಮುನಿರತ್ನ ವಿ | ಸದಸ್ಯರು | V. Muniratha |
| 16 | ಸಿ.ನಾಗರಾಜ | ಸದಸ್ಯರು | [signature] |
| 17 | ಲಕ್ಷ್ಮಮ್ಮ | ಸದಸ್ಯರು | |
| 18 | ಮೀನಾಕ್ಷಿ | ಸದಸ್ಯರು | |
| 19 | ಲಕ್ಷ್ಮಮ್ಮ | ಸದಸ್ಯರು | |
| 20 | ಜಿ.ಎಂ.ಶ್ರೀನಿವಾಸ್ | ಸದಸ್ಯರು | [signature] |

K.N. Savitha
ಅಧ್ಯಕ್ಷರು

[signature]
ಉಪಾಧ್ಯಕ್ಷರು
ಅರಾಭಿಕೊತ್ತನೂರು ಗ್ರಾಮ ಪಂಚಾಯತಿ